ಕರ್ನಾಟಕ ಸರ್ಕಾರ

# ಕಾಲೇಜು ಶಿಕ್ಷಣ ಇಲಾಖೆ

ದೂ: 080-22343904/05

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು-560001,

ಸಂಖ್ಯೆ: ಕಾಶಿಇ/ಶೈವಿ/24/ಪ್ರವೇಶಾತಿ/2018-19

ದಿನಾಂಕ: 21.05.2018

## ಸುತ್ತೋಲೆ

ವಿಷಯ: ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 2018-19ನೇ ಸಾಲಿನ ವಿದ್ಯಾರ್ಥಿಗಳ ಪ್ರವೇಶಾತಿ ಪ್ರಕ್ರಿಯೆ ಬಗ್ಗೆ.

* * * * * * *

ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಗೆ ಒಳಪಡುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಥಮ ಪದವಿ ತರಗತಿಗಳಿಗೆ 2018-19ನೇ ಶೈಕ್ಷಣಿಕ ಸಾಲಿನ ಪ್ರವೇಶಾತಿ ಪ್ರಕ್ರಿಯೆಯನ್ನು ತ್ವರಿತವಾಗಿ ಕೈಗೊಳ್ಳಬೇಕಾಗಿರುತ್ತದೆ. ರಾಜ್ಯದಲ್ಲಿ ಪದವಿ ಶಿಕ್ಷಣಕ್ಕೆ ಹೆಚ್ಚಿನ ಉತ್ತೇಜನವನ್ನು ನೀಡಿ ಶೇಕಡವಾರು G.E.R.*(Gross Enrollment Ratio)* ಹೆಚ್ಚಿಸುವುದು ಸರ್ಕಾರದ ನೀತಿ ವಿಷಯವಾಗಿದ್ದು, ಈ ದಿಸೆಯಲ್ಲಿ ರಾಜ್ಯದ ಎಲ್ಲಾ ನಗರ, ಗ್ರಾಮೀಣ ಪ್ರದೇಶ ಹಾಗೂ ಅತ್ಯಂತ ಹಿಂದುಳಿದ ಪ್ರದೇಶಗಳಲ್ಲಿನ ಸರ್ಕಾರಿ ಪದವಿ ಕಾಲೇಜುಗಳಲ್ಲಿನ ಪ್ರವೇಶಾತಿಯನ್ನು ಕಳೆದ ಸಾಲಿಗಿಂತ ಪ್ರಸ್ತುತ 2018-19ನೇ ಸಾಲಿಗೆ ಶೇ.15 ರಿಂದ 20 ರಷ್ಟು ಹೆಚ್ಚಿಸುವ ಗುರಿಯನ್ನು ಹೊಂದಲಾಗಿದೆ. ಈ ಹಿನ್ನೆಲೆಯಲ್ಲಿ ಕಾಲೇಜುಗಳ ಪ್ರಾಂಶುಪಾಲರುಗಳು ಕೆಳಕಂಡ ಸುಧಾರಣಾ ಕ್ರಮಗಳನ್ನು ಅನುಸರಿಸುವಂತೆ ಸೂಚಿಸಲಾಗಿದೆ.

1) ಸರ್ಕಾರಿ ಪದವಿ ಕಾಲೇಜುಗಳಲ್ಲಿ ಪ್ರವೇಶಾತಿಯನ್ನು ಹೆಚ್ಚಿಸುವ ಸಂಬಂಧ ಕಾಲೇಜುಗಳಲ್ಲಿ ಪ್ರವೇಶಾತಿ ಸಮಿತಿಯನ್ನು ರಚಿಸುವುದು. ಈ ಮೂಲಕ ದ್ವಿತೀಯ ಪಿ.ಯು.ಸಿ. ಪರೀಕ್ಷಾ ಫಲಿತಾಂಶ ಪ್ರಕಟವಾದಾಗಿನಿಂದಲೇ ಪದವಿ ತರಗತಿಗಳಿಗೆ ಪ್ರವೇಶಾವಕಾಶ ಬಯಸಿ ಬರುವ ವಿದ್ಯಾರ್ಥಿಗಳಿಗೆ ಉಚಿತವಾಗಿ ಅರ್ಜಿಯನ್ನು ವಿತರಿಸಿ, ಅಗತ್ಯ ದಾಖಲಾತಿಗಳನ್ನು ಪಡೆದು, ಪರಿಶೀಲಿಸಿ, ನಿಯಮಾನುಸಾರ ಪ್ರವೇಶ ನೀಡುವುದು.

2) ಕಾಲೇಜುಗಳಲ್ಲಿ ಲಭ್ಯವಿರುವ ಕೋರ್ಸು/ಕಾಂಬಿನೇಷನ್‌ಗಳ ವಿವರ, ಶುಲ್ಕಗಳ ವಿವರ ಮತ್ತು ವಿದ್ಯಾರ್ಥಿಗಳಿಗೆ ದೊರೆಯುವ ಸೌಲಭ್ಯಗಳ ಬಗ್ಗೆ ಮಾಹಿತಿಯನ್ನು ಕಾಲೇಜಿನ ಅಂತರ್ಜಾಲ ತಾಣದಲ್ಲಿ (Website) ಹಾಗೂ ಸೂಚನಾ ಫಲಕದಲ್ಲಿ (Notice Board) ಕಡ್ಡಾಯವಾಗಿ ಪ್ರಕಟಿಸುವುದು.

3) ಪ್ರಾಂಶುಪಾಲರು ಹಾಗೂ ಪ್ರತಿಯೊಬ್ಬ ಅಧ್ಯಾಪಕರೂ ವೈಯಕ್ತಿಕ ಗಮನಹರಿಸಿ ಪ್ರವೇಶಾತಿ ಹೆಚ್ಚಳಕ್ಕಾಗಿ ನೆರೆಹೊರೆಯ ಪಿ.ಯು. ಕಾಲೇಜುಗಳನ್ನು ಸಂಪರ್ಕಿಸಿ, ಸಂಬಂಧಿಸಿದ ಕಾಲೇಜಿನಲ್ಲಿ ಲಭ್ಯವಿರುವ ಕೋರ್ಸು/ಕಾಂಬಿನೇಷನ್‌ಗಳು ಮತ್ತು ವಿದ್ಯಾರ್ಥಿಗಳಿಗೆ ದೊರೆಯುವ ಸೌಲಭ್ಯಗಳ ಬಗ್ಗೆ ವ್ಯಾಪಕ ಪ್ರಚಾರ ನೀಡುವುದು ಹಾಗೂ ಅವಶ್ಯ ಮಾಹಿತಿ ನೀಡಿದ ಬಗ್ಗೆ ಸಂಬಂಧಿಸಿದ ಪಿ.ಯು. ಕಾಲೇಜಿನ ಪ್ರಾಂಶುಪಾಲರಿಂದ ದಾಖಲೆಯನ್ನು ಪಡೆದು ಕಾಲೇಜಿನಲ್ಲಿ ಇಡುವುದು.

4) ಸುತ್ತಮುತ್ತಲಿನ ಪಿ.ಯು. ಕಾಲೇಜುಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಪದವಿ ತರಗತಿಗಳಿಗೆ ಪ್ರವೇಶಾತಿ ಪಡೆಯುವ ವಿದ್ಯಾರ್ಥಿಗಳಿಗೆ ದೊರೆಯುವ ಸೌಲಭ್ಯಗಳ ಬಗ್ಗೆ ವಿದ್ಯಾರ್ಥಿಗಳಿಗೆ ಹಾಗೂ ಸ್ಥಳೀಯ ಪೋಷಕರಿಗೆ ಅರಿವು ಮೂಡಿಸಿ, ವ್ಯಾಪಕ ಪ್ರಚಾರ ನೀಡುವುದರೊಂದಿಗೆ ಪ್ರವೇಶಾತಿ ಹೆಚ್ಚಳಕ್ಕೆ ಅಗತ್ಯ ಕ್ರಮ ಕೈಗೊಳ್ಳುವುದು.

5) ವಿಶೇಷವಾಗಿ ಕಳೆದ ಶೈಕ್ಷಣಿಕ ಸಾಲುಗಳಲ್ಲಿ 200 ಕ್ಕಿಂತ ಕಡಿಮೆ ಪ್ರವೇಶಾತಿಯಾದ ಕಾಲೇಜುಗಳ ಪ್ರಾಂಶುಪಾಲರು ಪ್ರಸ್ತುತ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶಾತಿ ಹೆಚ್ಚಳಕ್ಕೆ ಅಗತ್ಯವಿರುವ ಎಲ್ಲಾ ರೀತಿಯ ಕ್ರಮಗಳನ್ನು ಕಡ್ಡಾಯವಾಗಿ ಅನುಸರಿಸುವುದು. ಅಲ್ಲದೆ ಕಾಲೇಜಿನ ಎಲ್ಲಾ ಬೋಧಕ/ಬೋಧಕೇತರ ಸಿಬ್ಬಂದಿಗಳು ಪ್ರವೇಶಾತಿ ಹೆಚ್ಚಿಸುವ ನಿಟ್ಟಿನಲ್ಲಿ ಸಕ್ರಿಯವಾಗಿ ಪಾಲ್ಗೊಂಡು ವಿದ್ಯಾರ್ಥಿಗಳು ಪ್ರವೇಶ ಪಡೆಯಲು ಪ್ರೇರೇಪಿಸುವುದು.

6) ಸರ್ಕಾರಿ ಪದವಿ ಕಾಲೇಜುಗಳಲ್ಲಿ ಪ್ರವೇಶಾತಿ ಹೆಚ್ಚಳಕ್ಕೆ ಸಂಬಂಧಿಸಿದಂತೆ ಉದ್ಯೋಗಾಧಾರಿತ ಕೋರ್ಸುಗಳನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳುವುದು.

7) ಕಳೆದ ಶೈಕ್ಷಣಿಕ ವರ್ಷದಲ್ಲಿ ಸಾಕಷ್ಟು ವಿದ್ಯಾರ್ಥಿಗಳು ಪ್ರವೇಶ ಪಡೆಯದೇ ಸ್ಥಗಿತವಾಗಿರುವ ಕೋರ್ಸುಗಳಿಗೆ ಎರಡನೇ ವರ್ಷಕ್ಕೆ ಪ್ರವೇಶ/ವರ್ಗಾವಣೆ ನೀಡುವ ಬಗ್ಗೆ ಮಾಹಿತಿ ನೀಡಿ ಆ ಕೋರ್ಸುಗಳನ್ನು ಪುನಶ್ಚೇತನಗೊಳಿಸುವ ಬಗ್ಗೆ ಕ್ರಮ ಕೈಗೊಳ್ಳುವುದು.

8) ಕಾಲೇಜುಗಳಲ್ಲಿ ವಿವಿಧ ಕೋರ್ಸ್/ಕಾಂಬಿನೇಷನ್‌ಗಳಿಗೆ ಪ್ರವೇಶ ಪಡೆದ ಎಲ್ಲಾ ವಿದ್ಯಾರ್ಥಿಗಳ (ಪ್ರಥಮ, ದ್ವಿತೀಯ & ತೃತೀಯ ವರ್ಷದ ತರಗತಿಗಳ) ಮಾಹಿತಿಯನ್ನು ಹಾಗೂ ಪ್ರವೇಶ ಪಡೆದ ವಿದ್ಯಾರ್ಥಿಗಳಿಂದ ಪ್ರತಿ ದಿನ ಸಂಗ್ರಹಿಸಲಾದ ಎಲ್ಲಾ ರೀತಿಯ ಸರ್ಕಾರಿ, ಅರೆ ಸರ್ಕಾರಿ ಹಾಗೂ ವಿಶ್ವವಿದ್ಯಾಲಯಗಳ ಶುಲ್ಕಗಳ ಮೊತ್ತದ ವಿವರಗಳನ್ನು ಕಡ್ಡಾಯವಾಗಿ ಅಂದೇ EMIS ಮೂಲಕ ಅಪ್‌ಲೋಡ್ ಮಾಡುವುದು.

9) ಕಾಲೇಜುಗಳಲ್ಲಿ ವಿವಿಧ ಕೋರ್ಸು/ಕಾಂಬಿನೇಷನ್‌ಗಳಿಗೆ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಂದ ಸರ್ಕಾರ/ಇಲಾಖೆಯು ನಿಗಧಿಪಡಿಸಿರುವ ಶುಲ್ಕಗಳನ್ನು ಮಾತ್ರ ವಸೂಲು ಮಾಡತಕ್ಕದ್ದು. ಸರ್ಕಾರ/ಇಲಾಖೆಯು ನಿಗಧಿಪಡಿಸಿದ ಶುಲ್ಕಗಳನ್ನು ಬಿಟ್ಟು ಹೆಚ್ಚುವರಿ ಶುಲ್ಕಗಳನ್ನು ವಸೂಲು ಮಾಡಿದಲ್ಲಿ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರನ್ನೇ ಜವಾಬ್ದಾರರನ್ನಾಗಿಸಿ, ನಿಯಮಾನುಸಾರ ಮುಂದಿನ ಕ್ರಮ ಕೈಗೊಳ್ಳಲಾಗುವುದು.

ಈ ಮೇಲ್ಕಂಡ ಕ್ರಮಗಳನ್ನು ಅನುಸರಿಸುವುದರೊಂದಿಗೆ ಪ್ರವೇಶಾತಿ ಕಡಿಮೆಯಾಗದಂತೆ ಕಾಳಜಿ ವಹಿಸಿ ಪ್ರಸ್ತುತ ಸಾಲಿನಲ್ಲಿ ಪ್ರವೇಶಾತಿ ಹೆಚ್ಚಳಕ್ಕೆ ಅಗತ್ಯವಿರುವ ಎಲ್ಲಾ ಕ್ರಮಗಳನ್ನು ಕೈಗೊಳ್ಳುವುದು.

**ಕಾಲೇಜು ಶಿಕ್ಷಣ ಆಯುಕ್ತರು**

**<u>ಇವರಿಗೆ:</u>**

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ ಮಂಗಳೂರು, ಧಾರವಾಡ ಮತ್ತು ಕಲಬುರಗಿ. - ಸೂಕ್ತ ಕ್ರಮಕ್ಕಾಗಿ.
2. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ (ಸಂಬಂಧಿಸಿದ ಜಂಟಿ ನಿರ್ದೇಶಕರ ಮೂಲಕ)
3. ಮಾಹಿತಿ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು-ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು.

**<u>ಪ್ರತಿಯನ್ನು:</u>**

1. ನಿರ್ದೇಶಕರು, ಮುಖ್ಯ ಆಡಳಿತಾಧಿಕಾರಿಗಳು, ಹೆಚ್ಚುವರಿ ನಿರ್ದೇಶಕರು, ಜಂಟಿ ನಿರ್ದೇಶಕರು, ಕಾಲೇಜು ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು.
2. ಕೇಂದ್ರ ಕಛೇರಿಯ ಎಲ್ಲಾ ಅಧಿಕಾರಿಗಳಿಗೆ.
4. ಕಛೇರಿ ಪ್ರತಿ